539(355) ಶ್ರೀ ಶಂಕರಲಿಂಗೇಗೌಡ ಹೆಚ್ ಎಸ್ (ಚಾಮರಾಜ) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ,

ಅ) ಮೈಸೂರು ನಗರದಲ್ಲಿರುವ ಸರ್ಕಾರಿ ಪ್ರಾಥಮಿಕ ಮತ್ತು ಪ್ರೌಢಶಾಲೆಗಳ ವಿವರ ನೀಡುವುದು,

ಆ) ಈ ಶಾಲೆಗಳಲ್ಲಿರುವ ಶಿಕ್ಷಕರ ಸಂಖ್ಯೆ ಎಷ್ಟೆಷ್ಟು ಎಂಬುದನ್ನು ತಿಳಿಸುವುದು,

ಇ) ಈ ಶಾಲೆಗಳ ಪೈಕಿ ಯಾವ ಯಾವ ಶಾಲೆಗಳಲ್ಲಿ ಯಾವ ಯಾವ ವಿಷಯಕ್ಕೆ ಸಂಬಂಧಿಸಿದಂತೆ, ಎಷ್ಟೆಷ್ಟು ಶಿಕ್ಷಕರ ಕೊರತೆ ಇದೆ ಎಂಬ ವಿವರ ನೀಡುವುದು,

ಈ) ಶಿಕ್ಷಕರ ಕೊರತೆ ನೀಗಿಸಲು ಸರ್ಕಾರ ಯಾವ ಕ್ರಮ ವಹಿಸಿದೆ ತಿಳಿಸುವುದು?

ಶ್ರೀ ಬಸವರಾಜ ಎಸ್ ಹೊರಟ್ಟಿ (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು)

ಅ) ಮೈಸೂರು ನಗರದಲ್ಲಿರುವ ಸರ್ಕಾರಿ ಪ್ರಾಥಮಿಕ ಶಾಲೆಗಳು 112, ಸರ್ಕಾರಿ ಪ್ರೌಢಶಾಲೆಗಳು 13

ಆ) 112 ಸರ್ಕಾರಿ ಪ್ರಾಥಮಿಕ ಶಾಲೆಗಳಲ್ಲಿ 823 ಶಿಕ್ಷಕರು ಹಾಗೂ 13 ಸರ್ಕಾರಿ ಪ್ರೌಢಶಾಲೆಗಳಲ್ಲಿ 132 ಶಿಕ್ಷಕರುಗಳು ಕಾರ್ಯನಿರ್ವಹಿಸುತ್ತಿದ್ದಾರೆ

ಇ) ಮೈಸೂರು ನಗರದ ಸರ್ಕಾರಿ ಪ್ರಾಥಮಿಕ ಶಾಲೆಗಳಲ್ಲಿ ಯಾವುದೇ ವಿಷಯದ ಶಿಕ್ಷಕರ ಕೊರತೆ ಇರುವುದಿಲ್ಲ ಸರ್ಕಾರಿ ಪ್ರೌಢಶಾಲೆಗಳಲ್ಲಿ ಈ ಕೆಳಕಂಡ ಶಾಲೆಗಳಲ್ಲಿ ಶಿಕ್ಷಕರ ಕೊರತೆ ಇರುತ್ತದೆ

1 ಸರ್ಕಾರಿ ಪ್ರೌಢಶಾಲೆ, ಎನ್ ಆರ್ ಮೊಹಲ್ಲಾ – ಕಲಾ (ಒಂದು ಹುದ್ದೆ)

2 ಸರ್ಕಾರಿ ಪ್ರೌಢಶಾಲೆ, ನಿಜಾಮಿಯ, ಪಿಸಿಎಂ ಉರ್ದು – (ಒಂದು ಹುದ್ದೆ)

3 ಸರ್ಕಾರಿ ಪದವಿ ಪೂರ್ವ ಕಾಲೇಜು, ಪೀಪಲ್ಸ್ ಪಾರ್ಕ್ ಸಿಬಿಝಡ್ (ಒಂದು ಹುದ್ದೆ)

ಈ) * ಸರ್ಕಾರಿ ಪ್ರಾಥಮಿಕ ಶಾಲಾ ಶಿಕ್ಷಕರ ಕೊರತೆ ಇರುವುದಿಲ್ಲ

* ಪ್ರೌಢಶಾಲಾ ಸಹ ಶಿಕ್ಷಕರ 5984 ಹುದ್ದೆಗಳಿಗೆ ದಿನಾಂಕ 25 9 06ರಂದು ಅಧಿಸೂಚನೆ ಹೊರಡಿಸಿ ಸ್ಪರ್ಧಾತ್ಮಕ ಪರೀಕ್ಷೆ ನಡೆಸಿ, ನೇಮಕಾತಿ ಪ್ರಕ್ರಿಯೆಯು ಚಾಲ್ತಿಯಲ್ಲಿದೆ ಮೈಸೂರು ನಗರದಲ್ಲಿನ ಪ್ರೌಢಶಾಲೆಗಳಲ್ಲಿ ಕೊರತೆ ಇರುವ 03 ಶಿಕ್ಷಕರ ಹುದ್ದೆಗಳನ್ನು ಸದರಿ ನೇಮಕಾತಿ ಸಮಯದಲ್ಲಿ ಭರ್ತಿ ಮಾಡಲಾಗುವುದು

540(356) ಶ್ರೀ ಶಂಕರಲಿಂಗೇಗೌಡ ಹೆಚ್ ಎಸ್ (ಚಾಮರಾಜ) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ,

ಅ) ಮೈಸೂರು ನಗರದಲ್ಲಿರುವ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳ ವಿವರ ನೀಡುವುದು,

ಆ) ಈ ಕಾಲೇಜುಗಳಲ್ಲಿನ ವಿಷಯವಾರು ವಿದ್ಯಾರ್ಥಿಗಳ ಸಂಖ್ಯೆ ತಿಳಿಸುವುದು,

ಇ) ಈ ಕಾಲೇಜುಗಳಲ್ಲಿನ ಬೋಧಕ ಹಾಗೂ ಬೋಧಕೇತರ ಸಿಬ್ಬಂದಿಗಳ ಹಾಲಿ ಸಂಖ್ಯೆ ತಿಳಿಸುವುದು,

ಈ) ಈ ಕಾಲೇಜುಗಳ ಪೈಕಿ ಯಾವ ಯಾವ ಕಾಲೇಜುಗಳಲ್ಲಿ ಎಷ್ಟೆಷ್ಟು ಸಂಖ್ಯೆಯ ಬೋಧಕ ಹಾಗೂ ಬೋಧಕೇತರ ಸಿಬ್ಬಂದಿಗಳ ಕೊರತೆ ಇದೆ ಎಂಬುದನ್ನು ವಿಷಯವಾರು ತಿಳಿಸುವುದು,

ಉ) ಬೋಧಕ ಹಾಗೂ ಬೋಧಕೇತರ ಸಿಬ್ಬಂದಿಗಳ ಕೊರತೆ ನೀಗಿಸಲು ಸರ್ಕಾರ ಯಾವ ಕ್ರಮವಹಿಸಿದೆ ವಿವರ ನೀಡುವುದು?

ಶ್ರೀ ಡಿ ಎಚ್ ಶಂಕರಮೂರ್ತಿ (ಉನ್ನತ ಶಿಕ್ಷಣ ಸಚಿವರು)

ಅ) ಮೈಸೂರು ನಗರದಲ್ಲಿರುವ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳ ವಿವರ ಈ ಕೆಳಕಂಡಂತಿವೆ

1) ಮಹಾರಾಣಿ ಮಹಿಳಾ ಕಲಾ ಕಾಲೇಜು, ಮೈಸೂರು